893 (1411): ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯ ಸೇರಿದಂತೆ ರಾಜ್ಯಾದ್ಯಂತ ಎಷ್ಟು ತಾಲ್ಲೂಕು ಪಂಚಾಯ್ತಿಗಳನ್ನು ಗಣಕೀಕರಣಗೊಳಿಸಲಾಗಿದೆ;

ಆ) ಇಲ್ಲದಿದ್ದಲ್ಲಿ, ಯಾವಾಗ ಗಣಕೀಕರಣಗೊಳಿಸಲಾಗುವುದು;

ಇ) ಗಣಕೀಕರಣಗೊಳಿಸುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯದಲ್ಲಿನ ಎಲ್ಲ ಒಟ್ಟು 176 ತಾಲ್ಲೂಕು ಪಂಚಾಯತಿಗಳನ್ನು ಗಣಕೀಕರಣಗೊಳಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಆ) ಎಲ್ಲಾ ತಾಲ್ಲೂಕು ಪಂಚಾಯತಿಗಳನ್ನು ಗಣಕೀಕರಣಗೊಳಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಇ) ಹೌದು.